**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.**

ಸಿ.ಸಿ.ನಂಃ 30/2021 ಸಿ.ಡಬ್ಲ್ಯೂ—೪ ಪಿ.ಡಬ್ಲ್ಯೂ-೨

| | | |
|---|---|---|
| ಹೆಸರು | ಃ | ಬಸವರಾಜ |
| ತಂದೆಃ ಗಂಡ | ಃ | ನಾಗಪ್ಪ |
| ವಯಸ್ಸು | ಃ | ೫೭ ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | ಃ | ನಿಂಬರ್ಗಾ |

ದಿನಾಂಕಃ೨೦.೧೨.೨೦೨೩

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ ಃ**

ಆರೋಪಿ ಪರಿಚಯ ಇರುವುದಿಲ್ಲ. ಚಾಸಾ-1 ರಿಂದ 3, 5, 7 ರಿಂದ 11 ರವರ ಪರಿಚಯ ಇರುವುದಿಲ್ಲ. ಚಾಸಾ-6 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ಪಂಚನಾಮೆಗೆ ನನ್ನನ್ನು ಕರೆದುಕೊಂಡು ಹೋಗಿರುವುದಿಲ್ಲ, ನನ್ನ ಸಮಕ್ಷಮ ಪಂಚನಾಮೆ ಮಾಡಿರುವುದಿಲ್ಲ, ಮು.ಮಾಲುಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ, ಪೋಲಿಸರು ಒಂದು ದಾಖಲೆಗೆ ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-3 ಎಂದು, ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಮಾನ್ಯ ಸಸಅ ಅವರಿಂದಃ**

ಪೋಲಿಸರು ನನ್ನ ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮೆಯನ್ನು ಜರುಗಿಸಿ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸರಿ ಅಲ್ಲ. ಸಹಿಯನ್ನು ಮಾಡಿದ್ದರೂ ಮಾಡಿಲ್ಲ ಎಂದು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೆನೆ ಎಂದರೆ ಸರಿ ಅಲ್ಲ.

**ಪಾ. ಸವಾಲು ಆರೋಪಿ ಪರ ಶ್ರೀ ಎಂ.ಎಸ್.ಹೆಚ್. ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ-** ಇರುವದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ.ಸಿ. ಆಳಂದ.